ಆಲೂರು ಪಟ್ಟಣದ ಸರ್ಕಾರಿ ಪ್ರೌಢಶಾಲೆ ಹಾಗೂ ಕಿರಿಯ ಕಾಲೇಜು ಕಟ್ಟಡಗಳು

244 (566) ಶ್ರೀ ಕುಮಾರಸ್ವಾಮಿ ಹೆಚ್.ಕೆ. (ಸಕಲೇಶಪುರ):– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಹಾಸನ ಜಿಲ್ಲೆ, ಆಲೂರು ಪಟ್ಟಣದ ಸರ್ಕಾರಿ ಪ್ರೌಢಶಾಲೆ ಮತ್ತು ಕಿರಿಯ ಕಾಲೇಜು ಕಟ್ಟಡ ತುಂಬಾ ಹಳೆಯದಾಗಿದ್ದು ಹಾಗು ಚಿಕ್ಕದಾಗಿದ್ದು, ಮಕ್ಕಳ ಸಂಖ್ಯೆ ಒಂದು ಸಾವಿರಕ್ಕೂ ಮೀರಿದ್ದು, ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಜಾಗ ಸಾಕಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಅಗತ್ಯವಾದ ಕಟ್ಟಡಗಳನ್ನು ಯಾವಾಗ ನಿರ್ಮಿಸಲಾಗುವುದು? (ಪೂರ್ಣ ಮಾಹಿತಿ ನೀಡುವುದು)

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) ಸರ್ಕಾರಿ ಪದವಿ ಪೂರ್ವ ಕಾಲೇಜು, ಆಲೂರು ಇಲ್ಲಿ ಪ್ರೌಢಶಾಲಾ ವಿಭಾಗದಲ್ಲಿ – 316 ಮಕ್ಕಳು ಮತ್ತು ಪದವಿ ಪೂರ್ವ ಕಾಲೇಜಿನಲ್ಲಿ – 650 ಮಕ್ಕಳು ವ್ಯಾಸಂಗ ಮಾಡುತ್ತಿದ್ದು ಇಲ್ಲಿ ಪಾಳಿ ಪದ್ಧತಿಯಲ್ಲಿ ಶಾಲೆ ನಡೆಯುತ್ತಿದೆ.

ಆ) ಆರ್.ಸಿ.ಸಿ.ಯ–8 ಕೊಠಡಿಗಳು, ಹೆಂಚು ಹೊದಿಕೆಯ–9 ಕೊಠಡಿಗಳು ಸೇರಿ ಒಟ್ಟು 17 ಕೊಠಡಿಗಳು ಇರುತ್ತದೆ ಇದರಲ್ಲಿ 5 ಕೊಠಡಿಗಳು ಶಿಥಿಲವಾಗಿವೆ.

ಆರ್.ಎಂ.ಎಸ್.ಎ. ಅಡಿ ಹಾಗೂ ರಾಜ್ಯ ವಲಯ ಮುಂದುವರಿದ ಯೋಜನೆಯಡಿ/ ಯೋಜನೇತರಡಿ ಅನುದಾನ ಲಭ್ಯತೆಯ ಆಧಾರದ ಮೇಲೆ ಹೆಚ್ಚುವರಿ ಕೊಠಡಿಗಳನ್ನು ನೀಡಲಾಗುವುದು.

ಆಸ್ಪತ್ರೆಗಳನ್ನು ಮೇಲ್ದರ್ಜೆಗೇರಿಸುವುದು

280 (879) ಶ್ರೀ ರೇವಣ್ಣ ಹೆಚ್.ಡಿ. (ಹೊಳೇನರಸೀಪುರ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ರಾಜ್ಯದಲ್ಲಿರುವ ಆಸ್ಪತ್ರೆಗಳನ್ನು ಪ್ರತಿ ವರ್ಷ ಮೇಲ್ದರ್ಜೆಗೇರಿಸಲು ಸರ್ಕಾರದಲ್ಲಿರುವ ಮಾನದಂಡವೇನು ;

ಆ) ಕಳೆದ ಮೂರು ವರ್ಷಗಳಲ್ಲಿ ಮೇಲ್ದರ್ಜೆಗೇರಿಸಲಾದ ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ವರ್ಷವಾರು, ವಿಧಾನಸಭಾವಾರು ಮಾಹಿತಿ ನೀಡುವುದು)